# ಮುರುಘಾಮಠಕ್ಕೆ ಜೆ.ಪಿ. ನಡ್ಡಾ ಭೇಟಿ

ಚಿತ್ರದುರ್ಗ , ಜೂ. 18 : ನಗರದ ಶ್ರೀ ಮುರುಘಾ ಮಠಕ್ಕಿಂದು ಭಾಜಪ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಭೇಟಿ ನೀಡಿ ಡಾ. ಶಿವಮೂರ್ತಿ ಮುರುಘಾ ಶರಣರನ್ನು ಭೇಟಿಯಾಗಿ ಆಶೀರ್ವಾದ ಪಡೆದರು. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ರಾಜ್ಯ ಉಸ್ತುವಾರಿ ಅರುಣ್‌ಸಿಂಗ್, ರಾಜ್ಯ ಭಾಜಪ ಅಧ್ಯಕ್ಷ ನಳೀನ್‌ಕುಮಾರ್ ಕಟೀಲ್, ಕೃಷಿ ಸಚಿವ ಬಿ.ಸಿ. ಪಾಟೀಲ್, ಲಕ್ಷ್ಮಣ ಸವದಿ, ಶಾಸಕರಾದ ತಿಪ್ಪಾರೆಡ್ಡಿ, ಎಂ.ಚಂದ್ರಪ್ಪ, ಶ್ರೀಮತಿ ಪೂರ್ಣಿಮಾ ಶ್ರೀನಿವಾಸ್, ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್, ಎಸ್. ಲಿಂಗಮೂರ್ತಿ, ಶಿವಕುಮಾರ್ ಪಾಟೀಲ್ ಮೊದಲಾದವರು ಜೊತೆಗಿದ್ದರು.

ಈ ಸಂದರ್ಭದಲ್ಲಿ ಶ್ರೀ ಶಿವಲಿಂಗಾನಂದ ಸ್ವಾಮಿಗಳು, ಶ್ರೀ ಬಸವಮೂರ್ತಿ ಮಾದಾರಚೆನ್ನಯ್ಯ ಸ್ವಾಮಿಗಳು, ಶ್ರೀ ಸಿದ್ಧರಾಮೇಶ್ವರ ಸ್ವಾಮಿಗಳು, ಶ್ರೀ ಬಸವ ಮಾಚಿದೇವ ಸ್ವಾಮಿಗಳು, ಶ್ರೀ ಬಸವ ಶಾಂತಲಿಂಗ ಸ್ವಾಮಿಗಳು, ಶ್ರೀ ಬಸವ ಪ್ರಭು ಸ್ವಾಮಿಗಳು, ಶ್ರೀ ಬಸವ ಕೃಷ್ಣಯಾದವಾನಂದ ಸ್ವಾಮಿಗಳು, ಶ್ರೀ ಬಸವ ಹರಳಯ್ಯ ಸ್ವಾಮಿಗಳು, ಶ್ರೀ ಚನ್ನಬಸವ ಸ್ವಾಮಿಗಳು, ಶ್ರೀ ಇಮ್ಮಡಿ ಕೇತೇಶ್ವರ ಸ್ವಾಮಿಗಳು ಉಪಸ್ಥಿತರಿದ್ದರು.




